ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಯಾದಗಿರಿ.

<u>ಸಿ.ಸಿ ನಂಃ **6236/2023**</u>

| | | |
|---|---|---|
| ಸಾಕ್ಷಿಯ ಹೆಸರುಃ | ವೆಂಕಟೇಶ | ಪ್ರಾಸಾಃ 5 |
| ಗಂಡನ/ತಂದೆಯ ಹೆಸರುಃ | ಮರೆಪ್ಪ | ಚಾಸಾಃ 7 |
| ವಯಸ್ಸುಃ | 42 ವರ್ಷ | ದಿಃ 22-08-2025 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಸೈದಾಪೂರ | |

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ</u>

ನನಗೆ ಚಾಸಾಃ 4 ರಿಂದ 6 ರವರ ಪರಿಚಯವಿದೆ. ಆರೋಪಿ ನಂಬರ 1 ರವರ ಪರಿಚಯವಿಲ್ಲ. ಸದರಿ ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಯಾವ ದಿನಾಂಕದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸದರಿ ಪೋಲಿಸರು ನನಗೆ ಕರೆಸಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲವಾಗಿ ನುಡಿಯುತ್ತಿದ್ದುದರಿಂದ ಸರಕಾರಿ ಸಹಾಯಕ ಅಭಿಯೋಜಕರು ಪಾಟಿ ಸವಾಲಿಗಾಗಿ ಅವಕಾಶ ಕೋರಿದ್ದು ನ್ಯಾಯಾಲಯದ ಮುಂದಿರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು**)**

ದಿನಾಂಕಃ 03-10-2023 ರಂದು ಸದರಿ ಅಪಘಾತದಲ್ಲಿ ಮೃತ ತಿಮ್ಮಪ್ಪ ಇವರು ಮರಣ ಹೊಂದಿರುತ್ತಾರೆ ಎಂದರೆ ನನಗೆ ಮಾಹಿತಿ ಇಲ್ಲ. ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಈಗ ನಿಪಿ-8 ರಂತೆ ವಿವರವಾಗಿ ಓದಿ ಹೇಳಲಾದ ಹೇಳಿಕೆಯನ್ನು ನಾನು ಪೊಲಿಸರ ಮುಂದೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಃಆರೋಪಿ ಪರ ವಕೀಲರಿಂದಃ ಇಲ್ಲ

ಮರುವಿಚಾರಣೆ ಃ ಇರುವುದಿಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ